ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

KARNATAKA LEGISLATIVE ASSEMBLY, RESEARCH AND REFERENCE BRANCH

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ಉಪಚುನಾವಣೆ

ಪತ್ರಿಕೆಯ ಹೆಸರು : NAME OF THE NEWS PAPER: ಉದಯ ವಾಣಿ ದಿನಾಂಕ : DATE : 18/4/21

# ಮತ ಭವಿಷ್ಯ ಭದ್ರ

ಉದ 18/4/21

ಬೆಳಗಾವಿ/ಮಸ್ಕಿ/ಬಸವಕಲ್ಯಾಣ: ಪ್ರತಿಷ್ಠೆಯ ಕಣವಾಗಿದ್ದ ಬೆಳಗಾವಿ ಲೋಕಸಭೆ, ಮಸ್ಕಿ, ಬಸವಕಲ್ಯಾಣ ವಿಧಾನಸಭೆ ಉಪಚುನಾವಣೆ ಮತದಾನ ಸಣ್ಣಪುಟ್ಟ ಅಹಿತಕರ ಘಟನೆ ಹೊರತುಪಡಿಸಿ ಶಾಂತಿಯುತವಾಗಿ ನಡೆದಿದೆ.

- **3 ಕ್ಷೇತ್ರಗಳಲ್ಲಿ ಶಾಂತಿಯುತ ಮತದಾನ**
- **ಸೋಂಕು ಭೀತಿಗೆ ಕಮ್ಮಿ ಮತ ಚಲಾವಣೆ**

ಕೇಂದ್ರ ಸಚಿವರಾಗಿದ್ದ ಸುರೇಶ ಅಂಗಡಿ ಅಕಾಲಿಕ ನಿಧನದಿಂದ ತೆರವಾದ ಬೆಳಗಾವಿ ಲೋಕಸಭೆ ಸ್ಥಾನಕ್ಕೆ ಬಿಜೆಪಿಯಿಂದ ಸುರೇಶ ಅಂಗಡಿ ಪತ್ನಿ ಮಂಗಲಾ ಅಂಗಡಿ, ಕಾಂಗ್ರೆಸ್‌ನಿಂದ ಸತೀಶ ಜಾರಕಿಹೊಳಿ ಸೇರಿ 10 ಜನ ಕಣದಲ್ಲಿದ್ದರು. ಕಾಂಗ್ರೆಸ್‌ನ ನಾರಾಯಣರಾವ್ ನಿಧನದಿಂದ ತೆರವಾಗಿದ್ದ ಬಸವಕಲ್ಯಾಣ ವಿಧಾನಸಭೆ ಕ್ಷೇತ್ರಕ್ಕೆ ಕಾಂಗ್ರೆಸ್‌ನಿಂದ ಮಾಲಾ ನಾರಾಯಣರಾವ್, ಬಿಜೆಪಿಯಿಂದ ಶರಣು ಸಲಗರ, ಜೆಡಿಎಸ್‌ನಿಂದ ಸೈಯದ್ ಯಸ್ರಬ್ ಅಲಿ ಖಾದ್ರಿ, ಬಿಜೆಪಿ ಬಂಡಾಯ ಅಭ್ಯರ್ಥಿ ಮಲ್ಲಿಕಾರ್ಜುನ ಖೂಬಾ ಸೇರಿದಂತೆ 12 ಜನ ಅದೃಷ್ಟ ಪರೀಕ್ಷೆಗಿಳಿದಿದ್ದಾರೆ. ಬಿಜೆಪಿ ಸೇರ್ಪಡೆಯಾಗಿದ್ದ ಮಸ್ಕಿ ಕ್ಷೇತ್ರದ ಬಿಜೆಪಿ ಹುರಿಯಾಳು ಪ್ರತಾಪಗೌಡ ಪಾಟೀಲ್, ಕಾಂಗ್ರೆಸ್‌ನ ಬಸನಗೌಡ ತುರವಿಹಾಳ ಸೇರಿದಂತೆ 8 ಅಭ್ಯರ್ಥಿಗಳ ಭವಿಷ್ಯ ಮತ ಪೆಟ್ಟಿಗೆಯಲ್ಲಿ ಭದ್ರವಾಗಿದೆ.

**ಮತದಾನ ಪ್ರಮಾಣ ಎಷ್ಟು?:** ಕೊರೊನಾ 2ನೇ ಅಲೆ ಆತಂಕ ಹಾಗೂ ಬಿಸಿಲಿನ ತಾಪದ ಹಿನ್ನೆಲೆಯಲ್ಲಿ ನಿರೀಕ್ಷಿತ ಪ್ರಮಾಣದ ಮತದಾನವಾಗಿಲ್ಲ, ಬೆಳಗಾವಿಯಲ್ಲಿ ಶೇ.54.62, ಮಸ್ಕಿಯಲ್ಲಿ ಶೇ.70.48 ಹಾಗೂ ಬಸವಕಲ್ಯಾಣದಲ್ಲಿ ಶೇ.61.49 ಮತದಾನವಾಗಿದೆ. ಬೆಳಗ್ಗೆ 7 ಗಂಟೆಗೆ ಮತದಾನ ಶುರುವಾದರೂ ಜನರು ಉತ್ಸಾಹ ತೋರಲಿಲ್ಲ. ಬಿಸಿಲಿನ ತಾಪ ಕಡಿಮೆಯಾಗುತ್ತಿದ್ದಂತೆ ಕೊಂಚ ಏರಿಕೆಯಾಯಿತು. ಮತಗಳ ವಿಭಜನೆ ಭೀತಿ ಇರುವುದರಿಂದ ಕಡಿಮೆ ಮತದಾನವಾಗಿದ್ದು ಅಭ್ಯರ್ಥಿಗಳಲ್ಲಿ ಆತಂಕ ಮೂಡಿಸಿದೆ.